All India Radio: Bangalore
Regional Bulletin In Kannada

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

27.01.2025 6.40 P.M.

****************

ಮುಖ್ಯಾಂಶಗಳು

- ಮುಡಾ ಪ್ರಕರಣ ಸಿಬಿಐ ಗೆ ನೀಡುವ ವಿಚಾರ; ತೀರ್ಪು ಕಾಯ್ದಿರಿಸಿದ ಉಚ್ಚ ನ್ಯಾಯಾಲಯದ ಧಾರವಾಡ ಪೀಠ
- ಮುಡಾ ಹಗರಣ; ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಆಗ್ರಹ
- ಶೀಘ್ರದಲ್ಲೇ 16 ರಿಂದ 18 ಸಾವಿರ ಪೇದೆಗಳ ಹುದ್ದೆಗೆ ಹಂತ ಹಂತವಾಗಿ ನೇಮಕ– ಗೃಹ ಸಚಿವ ಡಾ.ಜಿ.ಪರಮೇಶ್ವರ್
- ಅನಧಿಕೃತ ಜಾಹಿರಾತು ಅಳವಡಿಸುವವರ ವಿರುದ್ಧ ಎಫ್‌ಐಆರ್ ದಾಖಲಿಸುವಂತೆ ಬಿಬಿಎಂಪಿ ಮುಖ್ಯ ಆಯುಕ್ತರ ಸೂಚನೆ

****************

ಮುಡಾ ನಿವೇಶನ ಹಂಚಿಕೆ ಪ್ರಕರಣದ ತನಿಖೆಯನ್ನು ಸಿಬಿಐ ಗೆ ವಹಿಸಬೇಕು ಎಂದು ಸಲ್ಲಿಸಿದ್ದ ಅರ್ಜಿಯ ವಾದ ಪ್ರತಿವಾದ ಆಲಿಸಿದ ಉಚ್ಚ ನ್ಯಾಯಾಲಯದ ಧಾರವಾಡ ಪೀಠ ತೀರ್ಪು ಕಾಯ್ದಿರಿಸಿದೆ.

ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಪೀಠದಲ್ಲಿ ನಡೆದ ವಿಚಾರಣೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪರ ಅಭಿಷೇಕ್ ಮನುಸಿಂಘ್ವಿ, ವೀಡಿಯೋ ಕಾನ್ಫರೆನ್ಸ್ ಮೂಲಕ ವಾದ ಮಂಡಿಸಿದರು.

ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ನಿ ಪಾರ್ವತಿ ಹಾಗೂ ಸಚಿವ ಬಿ.ಸುರೇಶ್ ಗೆ ಇಡಿ ಅಧಿಕಾರಿಗಳು ನೋಟಿಸ್ ನೀಡಿದ್ದು, ವಿಚಾರಣೆಗೆ ಬೆಂಗಳೂರು ಉಚ್ಚ ನ್ಯಾಯಾಲಯ ಮಧ್ಯಂತ ತಡೆ ನೀಡಿದೆ.

****************

ಸಣ್ಣ ಹಣಕಾಸು ಸಂಸ್ಥೆಗಳ ಮರುಪಾವತಿ ವಿಚಾರದಲ್ಲಿ ಕಂಪನಿಯ ಏಜೆಂಟರು ಕಾನೂನು ಕೈಗೆತ್ತಿಕೊಳ್ಳುತ್ತಿದ್ದು, ಇದಕ್ಕೆ ಉನ್ನತ ಮಟ್ಟದ ಪೊಲೀಸ್ ಅಧಿಕಾರಿಗಳನ್ನು ನೇಮಿಸಿ, ಪರಿಶೀಲನೆ ನಡೆಸಬೇಕು ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಷಿ ತಿಳಿಸಿದ್ದಾರೆ.

ಮೈಸೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಾವ ಕಂಪನಿಗಳು ಆರ್‌ಬಿಐ ನೀತಿಗೆ ಒಳಪಡಲ್ಲವೋ ಅಂತ ಕಂಪನಿಗಳ ಬಗ್ಗೆ ಸರ್ಕಾರ ಕ್ರಮ ತೆಗೆದುಕೊಳ್ಳಬೇಕು ಎಂದು ಸೂಚಿಸಿದ್ದಾರೆ.

ಇದೇ ವೇಳೆ ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜೀನಾಮೆ ನೀಡದೇ ಇರುವುದು ಸಮರ್ಪಕವಲ್ಲ ಎಂದು ತಿಳಿಸಿದ್ದಾರೆ.

****************

ಮುಖ್ಯಮಂತ್ರಿ ಸಿದರಾಮಯ್ಯ ಇಡಿ ನೋಟಿಸ್ ಗೆ ಸಮರ್ಥವಾಗಿ ಉತ್ತರ ನೀಡಲಿದ್ದಾರೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಯಾದಗಿರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಡಾ ಪ್ರಕರಣ ಸಂಪೂರ್ಣ ರಾಜಕೀಯ ಪ್ರೇರಿತವೆಂದು ಆರೋಪಿಸಿದ್ದಾರೆ.

ಧ್ವನಿ: ಡಾ.ಜಿ.ಪರಮೇಶ್ವರ್

ಇದೇ ವೇಳೆ ಶರಣಾಗತಿಯಾದ ನಕ್ಸಲ್‌ರನ್ನು ಮತ್ತೊಮ್ಮೆ ಪರಿಶೀಲಿಸಿ ಅವರಿಗೆ ಸರ್ಕಾರದ ಪರವಾಗಿ ಪ್ಯಾಕೇಜ್ ನೀಡಲು ಚಿಂತನೆ ನಡೆಸಲಾಗುತ್ತಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಯಾವುದೇ ಸೈಬರ್ ಪ್ರಕರಣಗಳನ್ನು ಪೊಲೀಸ್ ಇಲಾಖೆ, ನಿರ್ಲಕ್ಷ್ಯ ವಹಿಸದೆ ಗಂಭೀರವಾಗಿ ತೆಗೆದುಕೊಳ್ಳಲಿದೆ ಎಂದು ಹೇಳಿದ್ದಾರೆ.

ರಾಜ್ಯದಲ್ಲಿ ಸುಮಾರು 16 ರಿಂದ 18 ಸಾವಿರ ಪೇದೆಗಳನ್ನು ಶೀಘ್ರದಲ್ಲೇ ಹಂತ ಹಂತವಾಗಿ ನೇಮಕ ಮಾಡಲಾಗುತ್ತದೆ ಎಂದು ತಿಳಿಸಿದ್ದಾರೆ.

****************

ಮುಡಾ ಹಗರಣದಲ್ಲಿ ಪ್ರಕರಣ ಮುಚ್ಚಿ ಹಾಕುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪ್ರಯತ್ನಕ್ಕೆ ದೊಡ್ಡ ಹಿನ್ನಡೆಯಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿಗಳು ಆತುರಾತುರವಾಗಿ ಲೋಕಾಯುಕ್ತ ಸಂಸ್ಥೆಯಿಂದ ಬಿ ರಿಪೋರ್ಟ್ ಪಡೆದು ಮುಡಾ ಹಗರಣದಿಂದ ಹೊರಕ್ಕೆ ಬರಬಹುದೆಂಬ ಲೆಕ್ಕಾಚಾರದಲ್ಲಿದ್ದರು. ಇದೇ ಸಂದರ್ಭದಲ್ಲಿ ಇ.ಡಿ ಅಧಿಕಾರಿಗಳು ಮುಖ್ಯಮಂತ್ರಿ ಧರ್ಮಪತ್ನಿ ಹಾಗೂ ಸಚಿವ ಬಿ.ಸುರೇಶ್ ಅವರಿಗೆ ನೋಟಿಸ್ ನೀಡಿದ್ದಾರೆ ಎಂದು ಹೇಳಿದ್ದಾರೆ.

****************

ಬಿಬಿಎಂಪಿ ವ್ಯಾಪ್ತಿಯಲ್ಲಿ ಅನಧಿಕೃತ ಜಾಹಿರಾತುಗಳನ್ನು ಅಳವಡಿಸುವವರ ಮೇಲೆ ಎಫ್‌ಐಆರ್ ದಾಖಲಿಸುವಂತೆ ಅಧಿಕಾರಿಗಳಿಗೆ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಸೂಚಿಸಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ಪಾಲಿಕೆಯ 8 ವಲಯಗಳಲ್ಲಿಯೂ ಅನಧಿಕೃತ ಜಾಹಿರಾತುಗಳು ಅಳವಡಿಸಿರುವುದನ್ನು ಗುರುತಿಸಿ, ಕೂಡಲೇ ಅದನ್ನು ತೆರವುಗೊಳಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ.

ಪಾಲಿಕೆಯ ವ್ಯಾಪ್ತಿಯಲ್ಲಿ 27 ಸಾವಿರದ 655 ಬೀದಿ ವ್ಯಾಪಾರಿಗಳನ್ನು ಗುರುತಿಸಲಾಗಿದ್ದು, ಅವರಿಗೆ ಗುರುತಿನ ಚೀಟಿ ನೀಡಿ, ನಿಗದಿಪಡಿಸಿರುವ ಸ್ಥಳದಲ್ಲೇ ಮಾರಾಟ ಮಾಡಲು ಕ್ರಮವಹಿಸಬೇಕು ಎಂದು ಸೂಚಿಸಿದ್ದಾರೆ.

****************

ಹಾವೇರಿ ಜಿಲ್ಲೆಯಲ್ಲಿ ಸಣ್ಣಹಣಕಾಸು ಸಂಸ್ಥೆಗಳು ಭಾರತೀಯ ರಿಸರ್ವ್ ಬ್ಯಾಂಕ್ ನ ನಿಯಮಾವಳಿಗೆ ಅನ್ವಯವಾಗುವಂತೆ ಮಾನವೀಯತೆಯಿಂದ ಸಾಲ ವಸೂಲಿ ಮಾಡಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಶಿವಾನಂದ ಪಾಟೀಲ್ ಎಚ್ಚರಿಕೆ ನೀಡಿದ್ದಾರೆ.

ಹಾವೇರಿ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿಂದು ನಡೆದ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತಾನಾಡಿದ ಅವರು, ಸಾಲ ವಸೂಲಾತಿ ನೆಪದಲ್ಲಿ ಗ್ರಾಹಕರ ಮೇಲೆ ದೌರ್ಜನ್ಯ ನಡೆಸಿದ್ದಲ್ಲಿ ಕಾನೂನು ಕ್ರಮ ಜರುಗಿಸಲಾಗುತ್ತದೆ ಎಂದು ತಿಳಿಸಿದ್ದಾರೆ.

****************

ಕಾಂಗ್ರೆಸ್ ಸರ್ಕಾರ ಕೆಟ್ಟ ನಿರ್ಧಾರದಿಂದಾಗಿ ಜನರು ಸಣ್ಣ ಹಣಕಾಸು ಸಂಸ್ಥೆಯಿಂದ ಸಾಲ ಪಡೆಯುತ್ತಿದ್ದಾರೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ.

ವಿಧಾನಸೌಧದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸರ್ಕಾರವೇ ಸಾಲ ನೀಡಿದ್ದರೆ ಜನರು ಆತ್ಮಹತ್ಯೆ ಮಾಡಿಕೊಳ್ಳುವ ಪರಿಸ್ಥಿತಿ ಬರುತ್ತಿರಲಿಲ್ಲ ಎಂದು ಹೇಳಿದ್ದಾರೆ.

****************

ದೆಹಲಿಯ ಗಣರಾಜ್ಯೋತ್ಸವ ಸಮಾರಂಭದಲ್ಲಿ ಪಾಲ್ಗೊಂಡಿದ್ದ ಲಕ್ಕುಂಡಿ ಸ್ತಬ್ಧಚಿತ್ರಕ್ಕೆ ಮತ ಹಾಕುವಂತೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತ ಹೇಮಂತ್ ಎಂ. ನಿಂಬಾಳ್ಕರ್ ಮನವಿ ಮಾಡಿದ್ದಾರೆ.

ವಿವಿಧ ರಾಜ್ಯಗಳ ಸ್ತಬ್ಧಚಿತ್ರಗಳನ್ನು ಜನಾಭಿಪ್ರಾಯ ಆಧರಿಸಿ ಪ್ರಶಸ್ತಿಗೆ ಪರಿಗಣಿಸಲು ಕೇಂದ್ರ ಸರ್ಕಾರದ ರಕ್ಷಣಾ ಸಚಿವಾಲಯ, ಆನ್ಲೈನ್ ನಲ್ಲಿ ಓಟ್ ಮಾಡಲು ಅವಕಾಶ ಕಲ್ಪಿಸಿದೆ. ಈ ಬಾರಿ ರಾಜ್ಯ 'ಲಕ್ಕುಂಡಿ: ಶಿಲ್ಪಕಲೆಯ ತೊಟ್ಟಿಲು ಶೀರ್ಷಿಕೆಯ ಸ್ತಬ್ಧಚಿತ್ರದೊಂದಿಗೆ ಭಾಗವಹಿಸಿತ್ತು.

ಜನವರಿ 28ರ ಮಧ್ಯರಾತ್ರಿ 12ರ ವರೆಗೆ ಮತ ಹಾಕಲು ಅವಕಾಶವಿದೆ. ತಮ್ಮ ನೋಂದಾಯಿತ ಮೊಬೈಲ್ ಸಂಖ್ಯೆಯಿಂದ MYGOVPOLL 35703712 ಟೈಪ್ ಮಾಡಿ 7738299899 ಮೊಬೈಲ್ ಸಂಖ್ಯೆಗೆ ಎಸ್‌ಎಂಎಸ್ ಮೂಲಕ ವೋಟ್ ಮಾಡಬಹುದಾಗಿದೆ.

****************

ನಿರುದ್ಯೋಗಿ ಯುವಜನರಿಗೆ ವಾಹನ ಚಾಲನೆ ತರಬೇತಿ ನೀಡಲು ಪ್ರಾದೇಶಿಕ ಸಾರಿಗೆ ಇಲಾಖೆಯಿಂದ ವಾಹನ ಚಾಲನಾ ತರಬೇತಿ ಕೇಂದ್ರ ಪ್ರಾರಂಭಿಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್ ಚಲುವರಾಯಸ್ವಾಮಿ ತಿಳಿಸಿದ್ದಾರೆ.

ಮಂಡ್ಯ ಜಿಲ್ಲೆಯ ನಾಗಮಂಗಲ ತಾಲ್ಲೂಕಿನ ಬೆಳ್ಳೂರಿನಲ್ಲಿ ಜನಸಂಪರ್ಕ ಸಭೆ ಉದ್ಘಾಟಿಸಿ, ತರಬೇತಿ ಕೇಂದ್ರ ಪ್ರಾರಂಭಿಸಲು 9.5 ಎಕರೆ ಸ್ಥಳವನ್ನು ಪ್ರಾದೇಶಿಕ ಸಾರಿಗೆ ಇಲಾಖೆಗೆ ಹಸ್ತಾಂತರಿಸಿದರು.

ಇದೇ ವೇಳೆ ಭೂ ಸುರಕ್ಷಾ ಯೋಜನೆಗೆ' ಚಾಲನೆ ನೀಡಿದರು. 31 ಕೋಟಿ ರೂಪಾಯಿ ವೆಚ್ಚದಲ್ಲಿ ಬೆಳ್ಳೂರು ಪಟ್ಟಣಕ್ಕೆ ಕುಡಿಯುವ ನೀರು ಸರಬರಾಜು ವಿತರಣಾ ಜಾಲ ವ್ಯವಸ್ಥೆಯನ್ನು ಒದಗಿಸುವ ಯೋಜನೆಗೆ ಶಂಕುಸ್ಥಾಪನೆ ನೆರವೇರಿಸಲಾಗಿದೆ. ಇದರಿಂದ ಹೆಚ್ಚುವರಿ ಟ್ಯಾಂಕ್ ಹಾಗೂ ಮನೆ– ಮನೆಗೆ ಕುಡಿಯುವ ನೀರಿನ ನಳ ಸಂಪರ್ಕ ಒದಗಿಸಲಾಗುವುದು ಎಂದರು.

****************

ಫೆಬ್ರವರಿ 1 ರಂದು ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಆಯವ್ಯಯ ಮಂಡಿಸಲಿದ್ದು, ಕೈಗಾರಿಕೋದ್ಯಮಿಗಳು ಹಲವು ನಿರೀಕ್ಷೆಯಲ್ಲಿದ್ದಾರೆ. ಈ ಕುರಿತಂತೆ ಆಕಾಶವಾಣಿ ಜೊತೆ ಮಾಹಿತಿ ಹಂಚಿಕೊಂಡಿರುವ ಎಫ್‌ಕೆಸಿಸಿಐ ಅಧ್ಯಕ್ಷ ಉಲ್ಲಾಸ್ ಕಾಮತ್, ಈ ಬಾರಿ ಉತ್ಪಾದನೆ ಹಾಗೂ ಉದ್ಯೋಗ ಸೃಷ್ಟಿಗೆ ಆದ್ಯತೆ ನೀಡುವಂತೆ ತಿಳಿಸಿದ್ದಾರೆ.

'ಮೇಕ್ ಇನ್ ಇಂಡಿಯಾ' ಗೆ ಹಣಕಾಸು ಸಚಿವರು ಒತ್ತು ನೀಡುವಂತೆ ಒತ್ತಾಯಿಸಿದ್ದಾರೆ.

ಧ್ವನಿ: ಉಲ್ಲಾಸ್ ಕಾಮತ್

****************

ಇನ್ನು ಸಂಕ್ಷಿಪ್ತ ಸುದ್ದಿಗಳು...

- ಚಿತ್ರದುರ್ಗ ಜಿಲ್ಲೆಯ ಆರು ತಾಲ್ಲೂಕು ವ್ಯಾಪ್ತಿಯ 21 ವಿದ್ಯುತ್ ವಿತರಣಾ ಕೇಂದ್ರಗಳ ಮೇಲೆ ಹೆಚ್ಚಿನ ಒತ್ತಡವಿದ್ದು, ಉಪ ವಿದ್ಯುತ್ ಕೇಂದ್ರಗಳ ನಿರ್ಮಾಣ ಕಾಮಗಾರಿ ಶೀಘ್ರವೇ ಪೂರ್ಣಗೊಳಿಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ತಿಳಿಸಿದ್ದಾರೆ. ಇದರಿಂದ ರೈತರಿಗೆ ಪಂಪ್‌ಸೆಟ್‌ಗಳಿಗೆ ನಿರಂತರ ವಿದ್ಯುತ್ ಲಭಿಸಲಿದೆ ಹೇಳಿದ್ದಾರೆ.
- ರಾಷ್ಟ್ರೀಯ ಹೆದ್ದಾರಿ 75 ರ ರಸ್ತೆ ಕಾಮಗಾರಿಯನ್ನು ತ್ವರಿತಗತಿಯಲ್ಲಿ ಪೂರ್ಣಗೊಳಿಸಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಬೇಕು ಎಂದು ಹಾಸನ ಸಂಸದ ಶ್ರೇಯಸ್ ಪಟೇಲ್ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.
- ಗ್ರಾಮ ಪಂಚಾಯತ್ ಮಟ್ಟದ ಕರ ವಸೂಲಾತಿಯಲ್ಲಿ ಶೇಕಡ 100 ರಷ್ಟು ಕರ ಸಂಗ್ರಹ ಗುರಿ ಸಾಧಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಉತ್ತರ ಕನ್ನಡ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ್ ಕಾಂದೂ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.
- ನ್ಯಾಯವಾದಿಗಳು ಕೆಲಸದ ಜೊತೆಗೆ ಆರೋಗ್ಯದ ಬಗ್ಗೆಯೂ ಕಾಳಜಿವಹಿಸಬೇಕು ಎಂದು ಗದಗ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಬಸವರಾಜ ತಿಳಿಸಿದ್ದಾರೆ.
- ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದ ಶಾಸಕ ಪ್ರದೀಪ್ ಈಶ್ವರ್ ನಾಳೆ ಕಮ್ಮಗುಟ್ಟಹಳ್ಳಿ ಗ್ರಾಮಪಂಚಾಯಿತಿ ವ್ಯಾಪ್ತಿಯ ಚಿಕ್ಕನಾರಪ್ಪನಹಳ್ಳಿ, ಕೊಮ್ಮಲಮರಿ ಮತ್ತು ದಿನ್ನಹಳ್ಳಿ ಗ್ರಾಮಗಳಲ್ಲಿ ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಲಿದ್ದಾರೆ ಎಂದು ಶಾಸಕರ ಕಚೇರಿ ಪ್ರಕಟಣೆ ತಿಳಿಸಿದೆ.

********ಮುಕ್ತಾಯ********